**NOVEMBER 06, 2025**
**ALL INDIA RADIO- DHARWAD**
**PRADESH SAMACHARA (KANNADA) 7:05 AM**

<><><>

**ಮುಖ್ಯಾಂಶಗಳು:**

- **ನ್ಯಾಯದ ಪ್ರವೇಶವು ಪ್ರತಿಯೊಬ್ಬ ನಾಗರಿಕನ ಹಕ್ಕು; ತಂತ್ರಜ್ಞಾನವು ಅದನ್ನು ಸಬಲೀಕರಣಗೊಳಿಸುವ ಸಾಧನ – ರಾಜ್ಯಪಾಲರ ಅಭಿಮತ.**

- **ಇದೇ 19 ರಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆವತಿಯಿಂದ ಗೃಹಲಕ್ಷ್ಮಿ ಬ್ಯಾಂಕ್ ಉದ್ಘಾಟನೆ.**

- **ಚಾಮರಾಜನಗರದಲ್ಲಿ ಕೆರೆ ತುಂಬಿಸಲು ಸರ್ಕಾರ ನೀರಾವರಿ ಇಲಾಖೆಗೆ ಅನುದಾನ ನೀಡಬೇಕು –ವಿಪಕ್ಷ ನಾಯಕ ಆರ್.ಅಶೋಕ್ ಆಗ್ರಹ.**

- **ವಂದೇ ಮಾತರಂ ಗೀತ ರಚನೆಗೆ 150 ವರ್ಷ; ದೇಶದೆಲ್ಲೆಡೆ ನಾಳೆ ವಂದೇ ಮಾತರಂ ಗೀತೆಯ ಸಾಮೂಹಿಕ ಗಾಯನ.**

**ವಾರ್ತೆಗಳ ವಿವರ...**

<><><>

**ನ್ಯಾಯದ ಪ್ರವೇಶವು ಪ್ರತಿಯೊಬ್ಬ ನಾಗರಿಕನ ಹಕ್ಕು. ಮತ್ತು ತಂತ್ರಜ್ಞಾನವು ಅದನ್ನು** ಸಬಲೀಕರಣಗೊಳಿಸುವ ಸಾಧನವಾಗಿದೆ. ಇ–ಕೋರ್ಟ್‌ಗಳು, ಆನ್‌ಲೈನ್ ಕಾನೂನು ನೆರವು ಮತ್ತು ಡಿಜಿಟಲ್ ಕಾನೂನು ಶಿಕ್ಷಣದಂತಹ ಉಪಕ್ರಮಗಳು ಈ ದಿಕ್ಕಿನಲ್ಲಿ ಮೈಲಿಗಲ್ಲುಗಳಾಗಿವೆ. ಈ ನಾವೀನ್ಯತೆಗಳಲ್ಲಿ ಕಾನೂನು ವಿದ್ಯಾರ್ಥಿಗಳು ಸಕ್ರಿಯ ಪಾತ್ರ ವಹಿಸಬೇಕು ಮತ್ತು ನ್ಯಾಯ ವ್ಯವಸ್ಥೆಯನ್ನು ಹೆಚ್ಚು ಪಾರದರ್ಶಕ ಮತ್ತು ಸುಲಭವಾಗಿಸಬೇಕು ಎಂದು ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಹೇಳಿದ್ದಾರೆ. ಹುಬ್ಬಳ್ಳಿಯಲ್ಲಿ ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯದ 7ನೇ ಘಟಿಕೋತ್ಸವದ ಅಧ್ಯಕ್ಷತೆವಹಿಸಿ ಅವರು ಮಾತನಾಡಿದರು. ಡಾ. ಭೀಮರಾವ್

ಅಂಬೇಡ್ಕರ್ ಅವರ ಕಾನೂನಿನ ವಿಧಾನವು ಆಳವಾದ, ಪ್ರಾಯೋಗಿಕ ಮತ್ತು ಮಾನವೀಯವಾಗಿತ್ತು. ಅವರು ಕಾನೂನನ್ನು ಸಾಮಾಜಿಕ ಬದಲಾವಣೆಗೆ ಪ್ರಾಥಮಿಕ ಸಾಧನವೆಂದು ಪರಿಗಣಿಸಿದರು. ಕಾನೂನು ಎಲ್ಲರಿಗೂ ಸಮಾನವಾಗಿದ್ದಾಗ ಮತ್ತು ಪ್ರತಿಯೊಬ್ಬ ವ್ಯಕ್ತಿಗೂ ಸಮಾನ ಅವಕಾಶ ಲಭ್ಯವಾದಾಗ ಮಾತ್ರ ನ್ಯಾಯಯುತ ಸಮಾಜ ಸಾಧ್ಯ ಎಂದು ಅವರು ನಂಬಿದ್ದರು. ಭಾರತೀಯ ಸಂವಿಧಾನದ ಮೂಲಕ, ಅವರು ಕಾನೂನನ್ನು ಸಮಾನತೆ, ಸ್ವಾತಂತ್ರ್ಯ ಮತ್ತು ಭ್ರಾತೃತ್ವದ ಆದರ್ಶಗಳಿಗೆ ಜೋಡಿಸಿದರು ಎಂದರು.

**ಧ್ವನಿ: ರಾಜ್ಯಪಾಲರು: 44 ಸೆಕೆಂಡ್**

<><><>

**ರಾಜ್ಯದ ಮಹಿಳೆಯರಿಗೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಗೆ ಶಕ್ತಿ** ತುಂಬುವುದೇ ತಮ್ಮ ಗುರಿ. ಮುಂದಿನ ದಿನಗಳಲ್ಲಿ ಇಲಾಖೆಯನ್ನು ನಂಬರ್ ಒನ್ ಮಾಡುವುದೇ ಕನಸಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್ ಹೇಳಿದ್ದಾರೆ. ಬೆಂಗಳೂರಿನ ಕಂಠೀರವ ಸ್ಟೇಡಿಯಂನಲ್ಲಿ ಇದೇ 19 ರಂದು ನಡೆಯಲಿರುವ ಐ.ಸಿ.ಡಿ.ಎಸ್ ಯೋಜನೆಯ ಅಂಗನವಾಡಿ ಸುವರ್ಣ ಮಹೋತ್ಸವ, ಅಕ್ಕಾ ಪಡೆ ಲೋಕಾರ್ಪಣೆ, ಗೃಹಲಕ್ಷ್ಮಿ ಬ್ಯಾಂಕ್ ಉದ್ಘಾಟನೆ ಕುರಿತು ಡಾ.ಬಾಬು ಜಗಜೀವನರಾಮ್ ಆಡಿಟೋರಿಯಂ ಮತ್ತು ತರಬೇತಿ ಕೇಂದ್ರದಲ್ಲಿ ನಡೆದ ರಾಜ್ಯಮಟ್ಟದ ಪೂರ್ವ ಭಾವಿ ಸಭೆಯಲ್ಲಿ ಮಾತನಾಡಿದ ಸಚಿವರು, ಕಾರ್ಯಕ್ರಮದ ಯಶಸ್ಸಿಗೆ ಪ್ರತಿಯೊಬ್ಬರು ಕೈಜೋಡಿಸಬೇಕು ಎಂದು ಕರೆ ನೀಡಿದರು. ವಿಶ್ವದಲ್ಲೇ ದೊಡ್ಡದಾದ ಗೃಹ ಲಕ್ಷ್ಮೀ ಯೋಜನೆಯನ್ನು ಯಶಸ್ವಿಯಾಗಿ ಜಾರಿಗೊಳಿಸಲಾಗಿದೆ. ಗೃಹಲಕ್ಷ್ಮಿ ಫಲಾನುಭವಿಗಳಿಗೆ ಲಾಭ ತಂದುಕೊಡುವ ಸಲುವಾಗಿ ಗೃಹಲಕ್ಷ್ಮಿ ವಿವಿಧೋದ್ದೇಶ ಸಹಕಾರ ಸಂಘವನ್ನು ಆರಂಭಿಸಲಾಗುತ್ತಿದೆ. 2000 ಜನ ಫಲಾನುಭವಿಗಳ ಹಣ ಸಂಗ್ರಹಿಸಲಾಗಿದ್ದು, ಇದು ಬಹಳ ದೊಡ್ಡ ಜವಾಬ್ದಾರಿಯಾಗಿದೆ. ಗೃಹಲಕ್ಷ್ಮಿ ಯೋಜನೆಯ ಮಾದರಿಯಲ್ಲೆ ಗೃಹಲಕ್ಷ್ಮಿ ಬ್ಯಾಂಕ್ ಕೂಡ ಜನಮನ್ನಣೆ ಗಳಿಸಲು ಅಧಿಕಾರಿಗಳು ಶ್ರಮ ಹಾಕಬೇಕು. ಮೂರು ತಿಂಗಳಲ್ಲಿ ಜಿಲ್ಲಾ ಮಟ್ಟಕ್ಕೂ ಗೃಹಲಕ್ಷ್ಮಿ ಸೊಸೈಟಿಯನ್ನು ವಿಸ್ತರಣೆ ಮಾಡಲಾಗುವುದು ಎಂದು ಸಚಿವರು ಹೇಳಿದರು.

<><><>

**ಕೇಂದ್ರ ಜಲಶಕ್ತಿ ಮತ್ತು ರೈಲ್ವೆ ಖಾತೆ ಸಚಿವ ವಿ.ಸೋಮಣ್ಣ** ದೆಹಲಿಯಲ್ಲಿ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಹಾಗೂ ಕೇಂದ್ರ ಗ್ರಾಹಕ ವ್ಯವಹಾರ, ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಪ್ರಲ್ಹಾದ ಜೋಶಿ ಅವರನ್ನು ಭೇಟಿ ಮಾಡಿ ಸಮಾಲೋಚನೆ ನಡೆಸಿದರು. ನಿರ್ಮಲಾ ಸೀತಾರಾಮನ್ ಭೇಟಿ ವೇಳೆ, ಜಿಎಸ್‌ಟಿ ಬೆಲೆ ಇಳಿಕೆಯಂತಹ ಮಹತ್ವದ ನಿರ್ಧಾರ ಕೈಗೊಂಡು ದೇಶದ ಜನತೆಯ ಆಶೋತ್ತರಗಳಿಗೆ ಸ್ಪಂದಿಸಿದ್ದಕ್ಕೆ ಅಭಿನಂದನೆ ಸಲ್ಲಿಸಿದರು. ಈ ಕುರಿತು ಮಾಹಿತಿ ಹಂಚಿಕೊಂಡಿರುವ ವಿ.ಸೋಮಣ್ಣ, ಕಳೆದ ಸೆಪ್ಟೆಂಬರ್ 22ರಿಂದ ಜಿಎಸ್‌ಟಿ ಬೆಲೆ ಇಳಿಕೆಯಾಗಿದ್ದು, ಶೇಕಡ 90ರಷ್ಟು ಸಾಮಗ್ರಿಗಳ ಬೆಲೆ ಇಳಿಕೆಯಾಗಿದೆ. ಇದು ದೇಶದ ಬಡವರು ಹಾಗೂ ಮಧ್ಯಮ ವರ್ಗದವರ ಜೀವನ ಮಟ್ಟದ ಹೆಚ್ಚಳದ ಜೊತೆಗೆ ಉಳಿತಾಯಕ್ಕೂ ಕಾರಣವಾಗಿದೆ. ಅಲ್ಲದೆ, ದೇಶದ ಆರ್ಥಿಕ ಪ್ರಗತಿಗೂ ಶಕ್ತಿ ನೀಡಿದೆ. ತುಮಕೂರಿನ ವಿವಿಧ ಭಾಗಗಳಲ್ಲಿ ಭೇಟಿ ನೀಡಿದ ಸಂದರ್ಭದಲ್ಲಿ ಜಿಎಸ್‌ಟಿ ಬೆಲೆ ಇಳಿಕೆಯ ಬಗ್ಗೆ ಜನರು ಹರ್ಷ ವ್ಯಕ್ತಪಡಿಸಿದ್ದಾರೆ ಎಂದು ಅವರು ಸಂತಸ ಹಂಚಿಕೊಂಡಿದ್ದಾರೆ.

<><><>

**ತುಂಗಭದ್ರಾ ಮತ್ತು ವರದಾ ನದಿಗಳ ಮಾಲಿನ್ಯಕ್ಕೆ ಕಾರಣರಾಗುವವರ ವಿರುದ್ಧ** ಕ್ರಮ ಕೈಗೊಳ್ಳಲಾಗುವುದು ಎಂದು ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಅಧ್ಯಕ್ಷ ಪಿ.ಎಂ.ನರೇಂದ್ರಸ್ವಾಮಿ ಹೇಳಿದ್ದಾರೆ. ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಸ್ಥಾಪನೆಗೊಂಡು 50 ವರ್ಷ ತುಂಬಿದ ಹಿನ್ನೆಲೆಯಲ್ಲಿ ದಾವಣಗೆರೆಯಲ್ಲಿ ಹಮ್ಮಿಕೊಂಡಿದ್ದ ಸುವರ್ಣ ಮಹೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ನಗರ ಮತ್ತು ಪಟ್ಟಣ ಪ್ರದೇಶಗಳಲ್ಲಿ ಉತ್ಪತ್ತಿಯಾಗುವ ಕಲ್ಮಶಗಳು ನದಿಗಳ ಮಾಲಿನ್ಯಕ್ಕೆ ಬಹು ಮುಖ್ಯ ಕಾರಣವಾಗುತ್ತಿವೆ. ಈ ಹಿನ್ನೆಲೆಯಲ್ಲಿ ನಗರ ಸ್ಥಳೀಯ ಸಂಸ್ಥೆಗಳು ಎಚ್ಚರಿಕೆ ವಹಿಸಬೇಕೆಂದು ಹೇಳಿದರು.

<><><>

**ಈಗ ಪ್ರಕಟಣೆ ನಂತರ ಪ್ರದೇಶ ಸಮಾಚಾರ ಮುಂದುವರಿಯುವುದು..**

**ಪ್ರಕಟಣೆ–56 ಸೆಕೆಂಡ್ಸ್**

**ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ**

<><><>

**ಚಾಮರಾಜನಗರದಲ್ಲಿ ಕೆರೆ ತುಂಬಿಸಲು ಕಾಂಗ್ರೆಸ್** ಸರ್ಕಾರ ನೀರಾವರಿ ಇಲಾಖೆಗೆ 200 ರಿಂದ 300 ಕೋಟಿ ರೂಪಾಯಿ ಅನುದಾನ ನೀಡಬೇಕು. ಮಾನವ, ವನ್ಯಜೀವಿ ಸಂಘರ್ಷ ತಡೆಗೆ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್.ಅಶೋಕ ಚಾಮರಾಜನಗರದಲ್ಲಿ ಆಗ್ರಹಿಸಿದ್ದಾರೆ. ನೀರಾವರಿ ಯೋಜನೆಗಳಿಗೆ ಅನುದಾನ ನಿಗದಿ ಮಾಡಿದ್ದನ್ನು ಬೇರೆ ಕಡೆ ವರ್ಗಾಯಿಸಲಾಗಿದೆ. ಜೊತೆಗೆ ಶೇಕಡ 30ರಷ್ಟ ಅನುದಾನವನ್ನು ಕಡಿಮೆ ಮಾಡಲಾಗಿದೆ. ಸರ್ಕಾರದ ಈ ನಡೆ ಸರಿಯಲ್ಲ ಎಂದು ಹೇಳಿದರು. ಚಾಮರಾಜನಗರ ಜಿಲ್ಲೆಯಲ್ಲಿ ಹುಲಿ ಹಾಗೂ ಆನೆ ದಾಳಿಯಿಂದ ಸ್ಥಳೀಯರು ಸಾವನ್ನಪ್ಪುತ್ತಿದ್ದರೂ ಅರಣ್ಯ ಇಲಾಖೆ ಯಾವುದೇ ಕ್ರಮ ಕೈಗೊಳ್ಳುತ್ತಿಲ್ಲ. ಬಗರ್‌ಹುಕುಂ ಅಡಿಯಲ್ಲಿ ಕೃಷಿ ಮಾಡುವವರಿಗೆ, ಬಿಜೆಪಿ ಸರ್ಕಾರ ಇದ್ದ ಅವಧಿಯಲ್ಲಿ ಹಕ್ಕುಪತ್ರ ನೀಡಲಾಗಿತ್ತು. ಆದರೆ ಕಾಂಗ್ರೆಸ್ ಸರ್ಕಾರ ಯಾವುದೇ ಹಕ್ಕುಪತ್ರಗಳನ್ನು ವಿತರಿಸಿಲ್ಲ. ರಾಜ್ಯದ ವಿವಿಧ ಭಾಗಗಳಲ್ಲಿ ಕಬ್ಬು ಬೆಳೆಗಾರರು ಪ್ರತಿಭಟನೆ ನಡೆಸುತ್ತಿದ್ದರೂ ಅವರ ಬೆಂಬಲಕ್ಕೆ ಸರ್ಕಾರ ನಿಂತಿಲ್ಲ ಎಂದು ತಿಳಿಸಿದರು.

<><><>

**ದೇಶದೆಲ್ಲೆಡೆ ನಾಳೆ ವಂದೇ ಮಾತರಂ** ಗೀತೆಯ ಸಾಮೂಹಿಕ ಗಾಯನ ನಡೆಯಲಿದೆ ಎಂದು ರಾಜ್ಯ ಬಿಜೆಪಿ ಉಪಾಧ್ಯಕ್ಷೆ ಹಾಗೂ ವಂದೇ ಮಾತರಂ 150ನೇ ವಾರ್ಷಿಕೋತ್ಸವದ ರಾಜ್ಯ ಸಂಚಾಲಕಿ ಮಾಳವಿಕ ಅವಿನಾಶ್ ಹೇಳಿದ್ದಾರೆ. ಬೆಂಗಳೂರಿನ ರಾಜ್ಯ ಬಿಜೆಪಿ ಕಾರ್ಯಾಲಯದಲ್ಲಿ, ಸುಮಾರು 300ರಿಂದ 400 ಮಂದಿ ಜನರು ಒಟ್ಟಿಗೆ ಸೇರಿ ವಂದೇ ಮಾತರಂ ಸಾಮೂಹಿಕ ಗಾಯನ ಪ್ರಸ್ತುತ ಪಡಿಸಲಿದ್ದಾರೆ. ಈ ಕಾರ್ಯಕ್ರಮದಲ್ಲಿ ಪಕ್ಷದ ಕಾರ್ಯಕರ್ತರು ಪಾಲ್ಗೊಳ್ಳಬೇಕು ಎಂದು ಅವರು ಹೇಳಿದರು. ಪಕ್ಷ ದೇಶಾದ್ಯಂತ 150 ಜಿಲ್ಲೆಗಳಲ್ಲಿ ವಂದೇ ಮಾತರಂ ಗೀತೆಯ 150ನೇ ವರ್ಷಾಚರಣೆಯನ್ನು ಆಚರಿಸಲು ನಿರ್ಧರಿಸಿದೆ. ರಾಜ್ಯದ ಬೆಂಗಳೂರು, ಮೈಸೂರು, ಚಿತ್ರದುರ್ಗ, ಬಾಗಲಕೋಟೆ, ಗದಗ, ಕಲಬುರಗಿ, ದಕ್ಷಿಣ ಕನ್ನಡ ಜಿಲ್ಲೆಗಳಲ್ಲೂ ವಂದೇ ಮಾತರಂ ಸಾಮೂಹಿಕ ಗಾಯನ ನಡೆಯಲಿದೆ ಎಂದು ತಿಳಿಸಿದರು.

<><><>

**ತೋಟಗಾರಿಕೆ ಮತ್ತು ಕೃಷಿ ಬೆಳೆಗಳಿಗೆ ನಿರ್ವಹಣೆ ಮುಖ್ಯ. ಇತ್ತೀಚೆಗೆ ಬೆಳೆಗಳಲ್ಲಿ** ತ್ಯಾಜ್ಯ ಹೆಚ್ಚಾಗಿದ್ದು ಅದರ ನಿರ್ವಹಣೆಯ ಬಗ್ಗೆ ಸರಿಯಾಗಿ ಚರ್ಚಿಸಿ ರೈತರಿಗೆ ತಿಳಿಸಬೇಕು ಎಂದು ಬಾಗಲಕೋಟೆ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ ಕುಲಪತಿ ಡಾ. ವಿಷ್ಣುವರ್ಧನ ಹೇಳಿದ್ದಾರೆ. ಬಾಗಲಕೋಟ, ತೋಟಗಾರಿಕೆ ವಿಜ್ಞಾನಿಗಳ ವಿಶ್ವವಿದ್ಯಾಲಯದ ವಿಸ್ತರಣಾ ನಿರ್ದೇಶನಾಲಯದ ಆವರಣದಲ್ಲಿ ತೋಟಗಾರಿಕೆ ಇಲಾಖೆ ಅಧಿಕಾರಿಗಳು ಹಾಗೂ ಆತ್ಮ ಸಿಬ್ಬಂದಿಗಳಿಗೆ ಏರ್ಪಡಿಸಲಾಗಿರುವ ಮೂರು ದಿನಗಳ ತರಬೇತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

<><><>

**ಧಾರವಾಡ ಡಿಸ್ಟ್ರಿಕ್ಟ್ ಲಾನ್ ಟೆನ್ನಿಸ್ ಅಸೋಸಿಯೇಷನ್ ವತಿಯಿಂದ ಇದೇ 7** ರಿಂದ 9 ರವರೆಗೆ ರಾಜ್ಯಮಟ್ಟದ ಪುರುಷರ ಲಾನ್ ಟೆನ್ನಿಸ್ ಪಂದ್ಯಾವಳಿಯನ್ನು ಡಿಡಿಎಲ್‌ಟಿಎ ಆವರಣದ ರಾಜ್ಯಾಧ್ಯಕ್ಷ ಪೆವಲಿನ್‌ದಲ್ಲಿ ಆಯೋಜಿಸಲಾಗಿದೆ ಎಂದು ಕಾರ್ಯದರ್ಶಿ ಸಂತೋಷ ಶೆಟ್ಟಿ ತಿಳಿಸಿದ್ದಾರೆ. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು; ಅವಳಿ ನಗರದ ಒಟ್ಟು 8 ಟೆನಿಸ್

ಕೋರ್ಟ್‌ಗಳಲ್ಲಿ ಪಂದ್ಯಗಳು ನಡೆಯುತ್ತವೆ. ಈಗಾಗಲೇ ಸುಮಾರು 260 ಜನರು ನೊಂದಣಿ ಮಾಡಿಕೊಂಡಿದ್ದಾರೆ. ಆಟಗಾರರ ನೋಂದಣಿಗೆ ಇನ್ನು ಅವಕಾಶವಿದ್ದು, ನವೆಂಬರ್ 7 ರಿಂದ 9 ವರೆಗೆ ಪ್ರತಿ ದಿನ ಬೆಳಿಗ್ಗೆ 7 ಗಂಟೆಯಿಂದ ಸಂಜೆ 7 ಗಂಟೆಯವರೆಗೆ ಪಂದ್ಯಾವಳಿಗಳು ಜರಗಲಿವೆ. ಅಂದಾಜು 400 ಸ್ಪರ್ಧಾಳುಗಳು ಭಾಗವಹಿಸುವ ನಿರೀಕ್ಷೆ ಇದೆ ಎಂದು ಹೇಳಿದರು. ಪಂದ್ಯಾವಳಿಯನ್ನು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ್ ಅವರು ಉದ್ಘಾಟಿಸುವರು. ಜಿಲ್ಲಾಧಿಕಾರಿ ದಿವ್ಯಾ ಪ್ರಭು ಅಧ್ಯಕ್ಷತೆ ವಹಿಸುವರು. ಶಾಸಕರ ಅನುದಾನದಲ್ಲಿ ನೂತನವಾಗಿ ನಿರ್ಮಿಸಿರುವ ಕ್ಲೇ ಕೋರ್ಟ್ ಆವರಣವನ್ನು ಶಾಸಕ ಅರವಿಂದ ಬೆಲ್ಲದ ಉದ್ಘಾಟಿಸುವರು. ವಿವಿಧ ಗಣ್ಯರು ಕಾರ್ಯಕ್ರಮದಲ್ಲಿ ಭಾಗವಹಿಸುವರು ಎಂದು ಅವರು ತಿಳಿಸಿದರು.

<><><>

**ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ವತಿಯಿಂದ ಅಗ್ನಿಪಥ್** ಯೋಜನೆಯಡಿ ಇದೇ 13ರಿಂದ 19ರವರೆಗೆ ಬಳ್ಳಾರಿಯ ಜಿಲ್ಲಾ ಕ್ರೀಡಾಂಗಣದಲ್ಲಿ ಅಗ್ನಿವೀರ್ ನೇಮಕಾತಿ ರ‍್ಯಾಲಿ ನಡೆಯಲಿದೆ. ಈ ರ‍್ಯಾಲಿಗೆ ಜೂನ್ 30ರಿಂದ ಜುಲೈ 10ರವರೆಗೆ ನಡೆದ ಆನ್‌ಲೈನ್ ಸಾಮಾನ್ಯ ಪ್ರವೇಶ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರುವ ಅಭ್ಯರ್ಥಿಗಳು ಭಾಗವಹಿಸಬಹುದು. ಪ್ರವೇಶ ಪರೀಕ್ಷೆಯ ಫಲಿತಾಂಶವನ್ನು joinindianarmy.nic.in ವೆಬ್‌ಸೈಟ್‌ನಲ್ಲಿ ವೀಕ್ಷಿಸಬಹುದೆಂದು ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯ ಉಪ ನಿರ್ದೇಶಕ ಡಾ.ಸಿ.ಎ. ಹಿರೇಮಠ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

<><><><><><><><><><><>

**ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು**

- **ನ್ಯಾಯದ ಪ್ರವೇಶವು ಪ್ರತಿಯೊಬ್ಬ ನಾಗರಿಕನ ಹಕ್ಕು; ತಂತ್ರಜ್ಞಾನವು ಅದನ್ನು ಸಬಲೀಕರಣಗೊಳಿಸುವ ಸಾಧನ – ರಾಜ್ಯಪಾಲರ ಅಭಿಮತ.**

- **ಇದೇ 19 ರಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆವತಿಯಿಂದ ಗೃಹಲಕ್ಷ್ಮಿ ಬ್ಯಾಂಕ್ ಉದ್ಘಾಟನೆ.**

- **ಚಾಮರಾಜನಗರದಲ್ಲಿ ಕೆರೆ ತುಂಬಿಸಲು ಸರ್ಕಾರ ನೀರಾವರಿ ಇಲಾಖೆಗೆ ಅನುದಾನ ನೀಡಬೇಕು –ವಿಪಕ್ಷ ನಾಯಕ ಆರ್.ಅಶೋಕ್ ಆಗ್ರಹ.**

- **ವಂದೇ ಮಾತರಂ ಗೀತ ರಚನೆಗೆ 150 ವರ್ಷ; ದೇಶದೆಲ್ಲೆಡೆ ನಾಳೆ ವಂದೇ ಮಾತರಂ ಗೀತೆಯ ಸಾಮೂಹಿಕ ಗಾಯನ.**

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು**

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ಈ ಬೆಳಿಗ್ಗೆ 7 ಗಂಟೆ 35 ನಿಮಿಷಕ್ಕೆ**

******END******